**ಕರ್ನಾಟಕ ಸರ್ಕಾರ**

ಕ್ರಮಾಂಕ: ಇಡಿ 363 ಯುಬಿವಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:16-08-2018

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ಬೆಂಗಳೂರು ಉತ್ತರ ವಿಶ್ವವಿದ್ಯಾಲಯ,
ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ.

ಮಾನ್ಯರೆ,

ವಿಷಯ:- 2018-19ನೇ ಸಾಲಿನಿಂದ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರವ್ಯಾಪ್ತಿಗೊಳಪಡುವ **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯಪುರ ರಸ್ತೆ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.-562 110** ಇಲ್ಲಿ ಹೊಸದಾಗಿ ವ್ಯಾಸಂಗಕ್ರಮವನ್ನು ಆರಂಭಿಸಲು ಸಂಯೋಜನೆ ನೀಡುವ ಕುರಿತು.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ: ಬೆ.ಉ.ವಿ.ಕು.ಸ.ಕಾ/ಹೊಕೋಪ್ರ/2018-19/117, ದಿ: 18-05-2018.

---

**ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯಪುರ ರಸ್ತೆ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.-562 110** ಇಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗಕ್ರಮವನ್ನು 2018-19ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59 (10)ರನ್ವಯ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2015ರ 07ನೇ ಪ್ರಕರಣದನ್ವಯ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳ ಅನುಮೋದನೆಯೊಂದಿಗೆ ಉಲ್ಲೇಖಿತ ಪತ್ರದಲ್ಲಿ ಸಲ್ಲಿಸಲಾದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳು ಹಾಗೂ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಪರಿಗಣಿಸಿ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2015ರ 07ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳು ಅನುಮೋದಿಸಿರುವ ಆಧಾರದ ಮೇಲೆ, **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯಪುರ ರಸ್ತೆ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.-562 110** ಇಲ್ಲಿ 2018-19ನೇ ಸಾಲಿನಿಂದ ಹೊಸದಾಗಿ ಈ ಕೆಳಕಂಡಂತೆ ಸ್ನಾತಕೋತ್ತರ ಪದವಿ ವ್ಯಾಸಂಗಕ್ರಮವನ್ನು ಅದರ ಮುಂದೆ ತೋರಿಸಲಾಗಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ ಪ್ರಾರಂಭಿಸುವ ಸಂಬಂಧ ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 59 (11)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಾಂಗಕ್ರಮ | ವಿಷಯ ಸಮೂಹ | ವಿದ್ಯಾರ್ಥಿ ಪ್ರವೇಶ ದಾಖಲಾತಿ ಪ್ರಮಾಣ |
|---|---|---|
| ಎಂ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 50 (ಐವತ್ತು) |

ತಮ್ಮ ನಂಬುಗೆಯ,
16/08/18
(ಎಂ.ಎ ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)

16/08/18

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ವಿಜಯಪುರ ರಸ್ತೆ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.-562 110.

Scanned with CamScanner